ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 24.05.2022

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ **25-05-2022** ರಿಂದ **29-05-2022** ವರೆಗೆ)

| ನಿಯತಾಂಕಗಳು | 25.5.2022 | 26.5.2022 | 27.5.2022 | 28.5.2022 | 29.5.2022 |
|---|---|---|---|---|---|
| ಮಳೆ (ಮಿ ಮಿ) | 1 | 2 | 0 | 0 | 0 |
| ಗರಿಷ್ಠ ಉಷ್ಣಾಂಶ °(ಡಿ.ಸೆ.) | 32 | 32 | 30 | 32 | 32 |
| ಕನಿಷ್ಠ ಉಷ್ಣಾಂಶ (ಡಿ.ಸೆ.) | 21 | 21 | 20 | 20 | 21 |
| ಮೋಡ (ಪ್ರಮಾಣ) | 6 | 7 | 7 | 4 | 4 |
| ಆರ್ದ್ರತೆ 7.20 ಬೆ (ಶೇ) | 82 | 82 | 87 | 87 | 85 |
| ಆರ್ದ್ರತೆ 2.20 ಮ (ಶೇ) | 55 | 55 | 58 | 57 | 55 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 6 | 6 | 7 | 6 | 6 |
| ಗಾಳಿಯ ದಿಕ್ಕು ( ಡಿಗ್ರಿ) | 270 | 270 | 249 | 252 | 252 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾದ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **30.0-32.0°C** ಮತ್ತು ಕನಿಷ್ಠ **200-21.0°C** ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ **82-87 %** ಇದ್ದು ಮಧ್ಯಾಹ್ನ **55-58 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **6-7** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

- ರೋಹಿಣಿ ನಕ್ಷತ್ರದ ಮಳೆಯ ಕಾಲವು ಮೇ ತಿಂಗಳ 25 ರಿಂದ ಜೂನ್ 07 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 61.9 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ ಸಲಹೆಗಳು | | 1. 2022 ರ ಮುಂಗಾರು ಮಳೆಯ ಮಾರುತಗಳು ಅಂಡಮಾನ್ ಮತ್ತು ನಿಕೋಬಾರ್ ದ್ವೀಪದಿಂದ ಬಂಗಾಳ ಕೊಲ್ಲಿಯ ಸುತ್ತಮುತ್ತ ಅಪ್ಪಳಿಸಿ ಬಂಗಾಳ ಕೊಲ್ಲಿಯ ಸುತ್ತಮುತ್ತ ಸುತ್ತುವರಿದಿದ್ದು ನಿಗದಿತ ಸಮಯಕ್ಕಿಂತ 2–3 ದಿನ ಮುಂಚೆ ಕೇರಳಕ್ಕೆ ಪ್ರವೇಶಿಸುವ ಸಾದ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.<br>2. ಬೇಸಿಗೆ ಉಳುಮೆ ಮಾಡುವುದರಿಂದ ಹುಳುಗಳ ವಿವಿಧ ಹಂತಗಳನ್ನು ನಾಶಪಡಿಸಬಹುದು ಮತ್ತು ಕಳೆಗಳನ್ನು ನಿಯಂತ್ರಿಸಬಹುದು.<br>3. ಮುಂಬರುವ ಬಿತ್ತನೆಗೆ ಅಗತ್ಯವಿರುವ ಬಿತ್ತನೆ ಬೀಜಮಾದರಿ0ಯನ್ನು ಬೀಜಪರೀಕ್ಷಾಲ0ಯಕ್ಕೆ ಕಳುಹಿಸುವ ಮೂಲಕ ಮೊಳಕೆ ಪ್ರಮಾಣದ ಸಾಮರ್ಥ್ಯ ತಿಳಿದುಕೊಳ್ಳುವುದು.<br>4. ಉತ್ತಮ ಮಳೆಯ ಅವಕಾಶ ಇರುವುದರಿಂದ ಬದುಗಳ ಸುತ್ತಲು ಮೇವಿನ ಹುಲ್ಲಿನ ಬೀಜಗಳನ್ನು ಬಿತ್ತನೆ ಮಾಡಿ ಇದರಿಂದ ಬದುಗಳು ಭದ್ರವಾಗಿರುತ್ತವೆ ಮತ್ತು ಜಮೀನುಗಳಲ್ಲಿ ನೀರಿನ ತೇವಾಂಶವನ್ನು ಕಾಪಾಡುತ್ತದೆ.<br>5. ಕೆರೆಗಳಲ್ಲಿ ಗೋಡು ಮಣ್ಣನ್ನು ತೆಗೆದು ಭೂಮಿಗೆ ಸೇರಿಸುವುದರಿಂದ ಭೂಮಿಯ ಫಲವತ್ತತೆಯನ್ನು ಹೆಚ್ಚಿಸಬಹುದು.<br>6. ಎಲ್ಲೆಲ್ಲಿ ಉತ್ತಮ ಮಳೆಯಾಗಿರುವ ಪ್ರದೇಶದಲ್ಲಿ ಹಾಗು ಮಣ್ಣಿನ ತೇವಾಂಶ ಸಾಕಷ್ಟು ಇರುವ ಕಡೆಗಳಲ್ಲಿ ದೀರ್ಘಾವಧಿ ಬೆಳೆಗಳಾದ ತೊಗರಿ ತಳಿಗಳಾದ ಬಿ.ಆರ್.ಜಿ–1, 2, 4 ಮತ್ತು 5 , ಟಿ.ಟಿ.ಬಿ–7 ಹಾಗು ಹರಳು ಬೆಳೆಯ ತಳಿಗಳಾದ ಡಿ.ಸಿ.ಎಚ್–7, 32 ಮತ್ತು 177 ಬಿತ್ತಲು ಸೂಕ್ತ ಸಮಯ. |
| ಮಾವು | ಕಾಯಿ ಬಲಿಯುವ ಮತ್ತು ಮಾಗುವ ಹಂತ | 1. ಮಾವಿನ ಬೆಳೆಗಳಲ್ಲಿ ಹಣ್ಣು ನೊಣದ ನಿಯಂತ್ರಣಕ್ಕಾಗಿ ಕಾರ್ಬರಿಲ್ 4 ಗ್ರಾ ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಣೆ ಮಾಡಿ.<br>2. ಹಣ್ಣನ್ನು ಕಟಾವು ಮಾಡುವ ಸಮ0ಯದಲ್ಲಿ ನೆಲಕ್ಕೆ ತಾಗದ ರೀತಿ ಎಚ್ಚರ ವಹಿಸಿ. ಇದರಿಂದ |

| | | |
|---|---|---|
| | | ಕಟಾವಿನ ನಂತರ ಶಿಲೀಂಧ್ರದಿಂದ ಬರುವ ಹಲವಾರು ರೋಗಗಳನ್ನು ತಡೆ0ಯಬಹುದು.<br>3. ಮಾವು ಬೆಳೆಗಾರರು ಚೆನ್ನಾಗಿ ಬಲಿತು ಕಟಾವಿಗೆ ಬಂದಿರುವ ಮಾವಿನ ಕಾಯಿಯನ್ನು ಕಟಾವು ಮಾಡುವಾಗ ಒಂದು ಇಂಚು ತೊಟ್ಟನ್ನು ಬಿಟ್ಟು ಕಟಾವು ಮಾಡಬೇಕು. ನಂತರ ಮಾವಿನ ಕಾಯಿಗಳನ್ನು ಪ್ಲಾಸ್ಟಿಕ್ ಕ್ರೇಟಿನಲ್ಲಿ ಪೇಪರ್ ಹಾಕಿ ಜೋಡಿಸಬೇಕು. ಕಟಾವು ಮಾಡಿದ 24 ಗಂಟೆಯ ನಂತರ ಕ್ರೇಟ್‌ಗಳನ್ನು ಒಂದರ ಮೇಲೊಂದರಂತೆ 5 ರಿಂದ 6 ಕ್ರೇಟ್‌ಗಳನ್ನು ಅರ್ಧ ಅಡಿ ಅಂತರದಲ್ಲಿ ಜೋಡಿಸಿ ಮಧ್ಯದಲ್ಲಿ ಸಣ್ಣ ಪ್ಲಾಸ್ಟಿಕ್ ಲೋಟಗಳಲ್ಲಿ 300 ಮಿ.ಲೀ. ನೀರಿನಲ್ಲಿ 10 ಮಿ.ಲೀ. ಎಥಿಲಿನ್ ದ್ರಾವಣ ಹಾಕಿ ನಂತರ 10 ಗ್ರಾಂ ನಷ್ಟು ಕಾಸ್ಟಿಕ್ ಸೋಡ (Sodium hydroxide) ಹಾಕಿಡಬೇಕು. ನಂತರ ಟಾರ್ಪಾಲ್‌ನಿಂದ ಗಾಳಿಯಾಡದಂತೆ ಭದ್ರವಾಗಿ ಮುಚ್ಚಬೇಕು. ಹೀಗೆ ಮಾಡಿದ 48 ಅಥವಾ 60 ಗಂಟೆಯ ನಂತರ ಟಾರ್ಪಾಲ್ ತೆಗೆದು ಗಾಳಿಯಾಡಲು ಬಿಡಬೇಕು. 1 ಟನ್ ಹಣ್ಣಿಗೆ 8 ರಿಂದ 10 ಗ್ಲಾಸ್‌ಗಳಲ್ಲಿ ಎಥಲಿನ್ ಇಡಬೇಕು. ಈ ರೀತಿಯಾಗಿ ನೈಸರ್ಗಿಕವಾಗಿ ಮಾಗಿಸುವುದರಿಂದ ಗುಣಮಟ್ಟದ ಹಣ್ಣನ್ನು ಪಡೆಯುವುದರ ಜೊತೆಗೆ ಉತ್ತಮ ಮಾರುಕಟ್ಟೆ ದರವನ್ನು ಪಡೆಯಬಹುದು. |
| **ರೇಷ್ಮೆ ಸಾಕಾಣಿಕೆ** | | 1. ರೇಷ್ಮೆ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು. |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.